9-72-(39)

**ಶ್ರೀ ಮರಿತಿಬ್ಬೇಗೌಡ ವಿಧಾನ ಪರಿಷತ್ತು ಸದಸ್ಯರು ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉಪಮುಖ್ಯಮಂತ್ರಿಗಳು, ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಸಚಿವರ ಹೇಳಿಕೆ:-**

**ವಿಷಯ:** ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ವತಿಯ (ವಸತಿ ಶಿಕ್ಷಣ ಸಂಸ್ಥೆಗಳ) ಅಧೀನದಲ್ಲಿನ ವಸತಿ ಶಾಲೆಗಳಲ್ಲಿ ರಾಜ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶದಂತೆ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗೆ ಕಳೆದ ಏಪ್ರಿಲ್ 2020 ರ ಮಾಹೆಯಿಂದ ವೇತನವನ್ನು ಪಾವತಿಸದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆಯ ಬಗ್ಗೆ.

****

**ಉತ್ತರ:-** ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯಲ್ಲಿ ಪ್ರತಿ ಶೈಕ್ಷಣಿಕ ವರ್ಷ ಜೂನ್ ರಿಂದ ಪ್ರಾರಂಭಗೊಂಡು ಮಾರ್ಚ್ ಅಂತ್ಯಕ್ಕೆ ಮುಕ್ತಾಯವಾಗುತ್ತಿದ್ದು, ಈ ಅವಧಿಯಲ್ಲಿ ಹೊರಸಂಪನ್ಮೂಲದ ಬೋಧಕ ಸಿಬ್ಬಂದಿಗಳಿಗೆ ವೇತನ ನೀಡಲಾಗುತ್ತಿದೆ. ಆದರೆ, ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ವಸತಿ ಶಾಲೆಗಳಿಗೆ ರಜೆ ಇರುವುದರಿಂದ ಹೊರಸಂಪನ್ಮೂಲದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳನ್ನು ಕರ್ತವ್ಯದಿಂದ ಬಿಡುಗಡೆ ಮಾಡಲಾಗುತ್ತಿದೆ ಮತ್ತು ಈ ಅವಧಿಯಲ್ಲಿ ವೇತನ ಪಾವತಿಸುವುದಿಲ್ಲ.

2020-21ನೇ ಸಾಲಿನಲ್ಲಿ ಕೋವಿಡ್-19 ರ ಸಾಂಕ್ರಾಮಿಕ ರೋಗ ಹರಡುವಿಕೆಯ ಹಿನ್ನೆಲೆಯಲ್ಲಿ ಜೂನ್ ತಿಂಗಳಲ್ಲಿ ಪ್ರಾರಂಭವಾಗಬೇಕಾದ ಶಾಲೆಗಳು ಇದುವರೆವಿಗೂ ಪ್ರಾರಂಭವಾಗಿರುವುದಿಲ್ಲ. ಆದುದರಿಂದ ಹೊರಸಂಪನ್ಮೂಲದ ಬೋಧಕರನ್ನು ಕರ್ತವ್ಯಕ್ಕೆ ತೆಗೆದುಕೊಂಡಿರುವುದಿಲ್ಲ ಮತ್ತು ವೇತನ ನೀಡಿರುವುದಿಲ್ಲ. ಶಾಲೆಗಳು ಪ್ರಾರಂಭವಾದ ನಂತರ ಹೊರಸಂಪನ್ಮೂಲದ ಬೋಧಕರನ್ನು ಕರ್ತವ್ಯಕ್ಕೆ ತೆಗೆದುಕೊಂಡು, ವೇತನ ಸಹ ನೀಡಲು ಕ್ರಮವಹಿಸಲಾಗುವುದು.

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಹಾಗೂ
ಸಮಾಜ ಕಲ್ಯಾಣ ಇಲಾಖಾ ಸಚಿವರು.

ಕಡತ ಸಂಖ್ಯೆ: ಸಕಇ 313 ಮೊದೇಶಾ 2020